# Bangalore
# Regional News
# 27.05.2025 / 2.30 P.M.

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

1. ಪಕ್ಷ ವಿರೋಧಿ ಚಟುವಟಿಕೆ ಹಿನ್ನೆಲೆ : ಬಿಜೆಪಿಯಿಂದ ಶಾಸಕ ಎಸ್.ಟಿ. ಸೋಮಶೇಖರ್, ಶಿವರಾಮ್ ಹೆಬ್ಬಾರ್ ೬ ವರ್ಷಗಳ ಕಾಲ ಉಚ್ಚಾಟನೆ
2. ದೇಶ ಇಂದು ಆರ್ಥಿಕವಾಗಿ ಹಾಗೂ ಆಹಾರದಲ್ಲಿ ಸ್ವಾವಲಂಬನೆ ಸಾಧಿಸಲು ಮಾಜಿ ಪ್ರಧಾನಿ ನೆಹರು ಕಾರಣ - ಮುಖ್ಯಮಂತ್ರಿ ಸಿದ್ದರಾಮಯ್ಯ
3. ಖ್ಯಾತ ಕ್ರಿಕೆಟಿಗ ಅನಿಲ್ ಕುಂಬ್ಳೆ ಅವರನ್ನು ಅರಣ್ಯ ಇಲಾಖೆ ರಾಯಭಾರಿಯಾಗಿ ನೇಮಿಸಿದ ಸರ್ಕಾರ
4. ನವದೆಹಲಿಯಲ್ಲಿಂದು ಹಿರಿಯ ನಟ ಅನಂತ್‌ನಾಗ್ ಸೇರಿದಂತೆ ರಾಜ್ಯದ ನಾಲ್ವರಿಗೆ ಪದ್ಮ ಪ್ರಶಸ್ತಿ ಪ್ರದಾನ
5. ರಾಜ್ಯದ ಹಲವೆಡೆ ಮಳೆ : ಕೃಷ್ಣಾನದಿ ಪಾತ್ರದಲ್ಲಿ ಜನರು ಎಚ್ಚರಿಕೆಯಿಂದ ಇರುವಂತೆ ಬೆಳಗಾವಿ ಜಿಲ್ಲಾಡಳಿತ ಸೂಚನೆ

<><><><>

ಪಕ್ಷ ವಿರೋಧಿ ಚಟುವಟಿಕೆಯಲ್ಲಿ ಭಾಗಿಯಾಗಿರುವ ಆರೋಪದ ಮೇಲೆ ಶಾಸಕ ಎಸ್.ಟಿ ಸೋಮಶೇಖರ್ ಮತ್ತು ಶಿವರಾಂ ಹೆಬ್ಬಾರ್ ಅವರನ್ನು ೬ ವರ್ಷಗಳ ಕಾಲ ಬಿಜೆಪಿಯಿಂದ ಉಚ್ಚಾಟನೆ ಮಾಡಲಾಗಿದೆ. ಈ ಉಭಯ ನಾಯಕರು ಕಾಂಗ್ರೆಸ್ ಪಕ್ಷದೊಂದಿಗೆ ಗುರುತಿಸಿಕೊಂಡಿದ್ದರು ಎಂಬ ಆರೋಪ ಕೇಳಿಬಂದ ಹಿನ್ನೆಲೆಯಲ್ಲಿ ಬಿಜೆಪಿ ಕೇಂದ್ರೀಯ ಶಿಸ್ತು ಸಮಿತಿ ಈ ನಿರ್ಧಾರ ಕೈಗೊಂಡಿದೆ. ಎಸ್.ಟಿ. ಸೋಮಶೇಖರ್ ಹಾಗೂ ಶಿವರಾಂ ಹೆಬ್ಬಾರ್ ಇಬ್ಬರಿಗೂ ಶೋಕಾಸ್ ನೋಟಿಸ್ ನೀಡಿ ಉತ್ತರಿಸುವಂತೆ ಸೂಚಿಸಲಾಗಿತ್ತು. ಶಿವರಾಮ್ ಹೆಬ್ಬಾರ್ ಉತ್ತರಕನ್ನಡ ಜಿಲ್ಲೆಯ ಯಲ್ಲಾಪುರ ಕ್ಷೇತ್ರವನ್ನು ಪ್ರತಿನಿಧಿಸುತ್ತಿದ್ದಾರೆ. ಎಸ್.ಟಿ. ಸೋಮಶೇಖರ್ ಬೆಂಗಳೂರಿನ ಯಶವಂತಪುರ ಕ್ಷೇತ್ರದಿಂದ ೩ನೇ ಬಾರಿಗೆ ಶಾಸಕರಾಗಿ ಆಯ್ಕೆಯಾಗಿದ್ದಾರೆ. ೨ ತಿಂಗಳ ಹಿಂದಷ್ಟೇ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರನ್ನು ೬ ವರ್ಷಗಳ ಕಾಲ ಬಿಜೆಪಿಯಿಂದ ಉಚ್ಚಾಟನೆ ಮಾಡಲಾಗಿತ್ತು.

<><><><>

ಮಾಜಿ ಪ್ರಧಾನಿ ಜವಾಹರ್ ಲಾಲ್ ನೆಹರು ಆಧುನಿಕ ಭಾರತದ ನಿರ್ಮಾತೃ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ನೆಹರು ಪುಣ್ಯತಿಥಿಯ ಅಂಗವಾಗಿ ಅವರ ಪ್ರತಿಮೆಗೆ ಪುಷ್ಪನಮನ ಸಲ್ಲಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ದೇಶ ಇಂದು ಆರ್ಥಿಕವಾಗಿ ಹಾಗೂ ಆಹಾರದಲ್ಲಿ ಸ್ವಾವಲಂಬನೆಯನ್ನು ಕಂಡುಕೊಂಡಿದ್ದರೆ ನೆಹರೂ ಹಾಕಿದ ಅಡಿಪಾಯ ಕಾರಣ ಎಂದು ತಿಳಿಸಿದ್ದಾರೆ.

ಧ್ವನಿ : ಮುಖ್ಯಮಂತ್ರಿ ಸಿದ್ಧರಾಮಯ್ಯ

ಇದೇ ವೇಳೆ ಕೋವಿಡ್ ಕುರಿತಂತೆ ಪ್ರತಿಕ್ರಿಯಿಸಿದ ಅವರು ಇದು ಗಂಭೀರವಾದ ತಳಿಯಲ್ಲ ಎಂದು ಹೇಳಿದ್ದಾರೆ. ನೆಗಡಿ, ಕೆಮ್ಮು, ಜ್ವರ ಬಂದಿರುವ ಮಕ್ಕಳನ್ನು ಶಾಲೆಗೆ ಕಳುಹಿಸಬಾರದು. ವೃದ್ಧರು, ವಿವಿಧ ಕಾಯಿಲೆಗಳಿಗೆ ತುತ್ತಾಗಿರರುವರು ಕಡ್ಡಾಯವಾಗಿ ಮಾಸ್ಕ್ ಧರಿಸಬೇಕು ಎಂದು ತಿಳಿಸಿದ್ದಾರೆ. ವಿಮಾನ ನಿಲ್ದಾಣಗಳಲ್ಲಿ ತಪಾಸಣೆ ಮಾಡಲು ಕೇಂದ್ರದಿಂದ ಸೂಚನೆ ಬಂದಿಲ್ಲ. ಆದರೆ ಎಚ್ಚರಿಕೆ ವಹಿಸಲಾಗುವುದು ಎಂದು ಮುಖ್ಯಮಂತ್ರಿ ಸ್ಪಷ್ಟಪಡಿಸಿದ್ದಾರೆ.

<><><><>

ಖ್ಯಾತ ಕ್ರೀಡಾಪಟು, ಮಾಜಿ ಕ್ರಿಕೆಟಿಗ ಅನಿಲ್ ಕುಂಬ್ಳೆ ಅವರನ್ನು ಅರಣ್ಯ ಮತ್ತು ವನ್ಯಜೀವಿ ರಾಯಭಾರಿಯಾಗಿ ನಾಮ ನಿರ್ದೇಶನ ಮಾಡಲಾಗುವುದು ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅರಣ್ಯ ಸಂರಕ್ಷಣೆ, ಅರಣ್ಯ ಸಂವರ್ಧನೆ, ವೃಕ್ಷ ಸಂರಕ್ಷಣೆ, ವನ್ಯಜೀವಿ ಸಂರಕ್ಷಣೆಯ ಬಗ್ಗೆ ಅನಿಲ್ ಕುಂಬ್ಳೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲಿದ್ದಾರೆ ಎಂದು ಹೇಳಿದ್ದಾರೆ. ಅನಿಲ್ ಕುಂಬ್ಳೆ ಅವರಿಗೆ ವನ್ಯಜೀವಿಗಳ ಬಗ್ಗೆ ಅಪಾರ ಕಾಳಜಿ ಇದೆ. ಹೀಗಾಗಿ ಅವರು ಯಾವುದೇ ಸಂಭಾವನೆ ಪಡೆಯದೆ ರಾಯಭಾರಿ ಆಗಲು ಸಮ್ಮತಿಸಿದ್ದಾರೆ ಎಂದು ಈಶ್ವರ ಖಂಡ್ರೆ ಸ್ಪಷ್ಟಪಡಿಸಿದ್ದಾರೆ. ರಾಜ್ಯದಲ್ಲಿ ಕಳೆದ ೨ ವರ್ಷಗಳಲ್ಲಿ ಸುಮಾರು ೮ ಸಾವಿರದ ೮೪೮ ವನಮಹೋತ್ಸವ ನಡೆಸಲಾಗಿದೆ ಎಂದು ಅವರು ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ೧ ಸಾವಿರದ ೫೦೦ ಕೋಟಿ ರೂಪಾಯಿ ಮೌಲ್ಯದ ೧೨೮ ಎಕರೆ ಅರಣ್ಯ ಒತ್ತುವರಿ ತೆರವು ಮಾಡಲಾಗಿದೆ ಎಂದು ಇದೇ ವೇಳೆ ಸ್ಪಷ್ಟಪಡಿಸಿದ್ದಾರೆ.

<><><><>

ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದು ಸಂಜೆ ರಾಷ್ಟ್ರಪತಿ ಭವನದಲ್ಲಿ ನಡೆಯಲಿರುವ ಸಮಾರಂಭದಲ್ಲಿ ಪದ್ಮ ಪ್ರಶಸ್ತಿಗಳನ್ನು ಪ್ರದಾನ ಮಾಡಲಿದ್ದಾರೆ. ಇಂದು ಎರಡನೇ ಕಂತಿನ ಪ್ರಶಸ್ತಿ ಪ್ರದಾನ ಸಮಾರಂಭ ನಡೆಯಲಿದ್ದು, ಕಲೆ, ಸಾಮಾಜಿಕ ಕಾರ್ಯ, ಸಾರ್ವಜನಿಕ ವ್ಯವಹಾರ, ವಿಜ್ಞಾನ, ಇಂಜಿನಿಯರಿಂಗ್, ವೈದ್ಯಕೀಯ ಸಾಹಿತ್ಯ, ಶಿಕ್ಷಣ, ಕ್ರೀಡೆ ಮತ್ತು ನಾಗರಿಕ ಸೇವೆಯಲ್ಲಿ

ಅತ್ಯುತ್ತಮ ಸೇವೆ ಸಲ್ಲಿಸಿದವರನ್ನು ಗುರುತಿಸಿ, ಪ್ರಶಸ್ತಿಗಳನ್ನು ಪ್ರದಾನ ಮಾಡಲಾಗುವುದು. ಇಂದು ನಡೆಯಲಿರುವ ಸಮಾರಂಭದಲ್ಲಿ ೬೮ ಗಣ್ಯರಿಗೆ ಪದ್ಮ ಪ್ರಶಸ್ತಿ ನೀಡಲಾಗುವುದು. ಆ ಪೈಕಿ ಕಲೆಯಲ್ಲಿ ರಾಜ್ಯದ ಹಿರಿಯ ನಟ ಅನಂತನಾಗ್ ಅವರಿಗೆ ಪದ್ಮಭೂಷಣ ಪ್ರಶಸ್ತಿ ನೀಡಿ ಗೌರವಿಸಲಾಗುವುದು. ಉಳಿದಂತೆ ಕಲೆಯಲ್ಲಿ ಡಾ. ರಿಕ್ಕಿ ಕೇಜ್, ಡಾ. ವೆಂಕಪ್ಪ ಅಂಬಾಜಿ ಸುಗಟೇಕರ್, ವ್ಯಾಪಾರ ಮತ್ತು ಕೈಗಾರಿಕಾ ಕ್ಷೇತ್ರದಲ್ಲಿ ಪ್ರಶಾಂತ ಪ್ರಕಾಶ್ ಅವರಿಗೆ ಪದ್ಮಪ್ರಶಸ್ತಿ ಪ್ರದಾನ ಮಾಡಲಿದ್ದಾರೆ.

<><><>

ರಾಜ್ಯ ಕಾಂಗ್ರೆಸ್ ಸರ್ಕಾರ ಜನ ವಿರೋಧಿ ನೀತಿಗಳ ಮೂಲಕ ಪದೇ ಪದೇ ತಪ್ಪೆಸಗುತ್ತಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಬೆಂಗಳೂರಿನಲ್ಲಿಂದು ಆರೋಪಿಸಿದ್ದಾರೆ. ಕೇಂದ್ರ ಸರ್ಕಾರ ಕರೆದಿದ್ದ ಮಹತ್ವದ ನೀತಿ ಆಯೋಗದ ಸಭೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಗೈರು ಹಾಜರಾಗಿದ್ದು ಅವರು ಕಾಂಗ್ರೆಸ್ ಮುಖ್ಯಮಂತ್ರಿಯೋ ಅಥವಾ ರಾಜ್ಯದ ಮುಖ್ಯಮಂತ್ರಿಯೋ ಎಂಬುದನ್ನು ಸ್ಪಷ್ಟಪಡಿಸಬೇಕು ಎಂದು ಆಗ್ರಹಿಸಿದ್ದಾರೆ.

ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿಯ ಜನೌಷಧಿ ಯೋಜನೆ, ಬಡವರು ಹಾಗೂ ಮಧ್ಯಮ ವರ್ಗದವರ ಪಾಲಿಗೆ ಸಂಜೀವಿನಿಯಾಗಿದೆ. ಆದರೆ, ರಾಜ್ಯ ಸರ್ಕಾರ, ಅವುಗಳನ್ನು ಮುಚ್ಚುವ ಮೂಲಕ, ಜನವಿರೋಧಿ ನೀತಿ ಅನುಸರಿಸುತ್ತಿದೆ  ಎಂದು ದೂರಿದ್ದಾರೆ.

<><><>

ಬಿಜೆಪಿ ಪರಿಷತ್ ಸದಸ್ಯ, ವಿಧಾನ ಪರಿಷತ್ ಪ್ರತಿಪಕ್ಷದ ಮುಖ್ಯ ಸಚೇತಕ ಎನ್. ರವಿಕುಮಾರ್ ಅವರು, ಕಲಬುರಗಿ ಜಿಲ್ಲಾಧಿಕಾರಿಯನ್ನು ಪಾಕಿಸ್ತಾನಿ ಎಂದು ಕರೆದಿರುವುದು ವಿವಾದಕ್ಕೆ ಕಾರಣವಾಗಿದೆ. ಈ ಹೇಳಿಕೆಯನ್ನು ಐಎಎಸ್ ಅಧಿಕಾರಿಗಳ ಸಂಘ ಖಂಡಿಸಿದೆ. ಪೊಲೀಸರು ಘಟನೆಗೆ ಸಂಬಂಧಿಸಿದಂತೆ ರವಿಕುಮಾರ್ ವಿರುದ್ಧ ಎಫ್ಐಆರ್ ದಾಖಲಿಸಿದ್ದು, ಕಾನೂನು ಕ್ರಮ ಕೈಗೊಳ್ಳಲು ಸಿದ್ಧತೆ ನಡೆಸಿದ್ದಾರೆ ಎಂದು ಐಎಎನ್ಎಸ್ ಸುದ್ದಿ ಸಂಸ್ಥೆ ವರದಿ ಮಾಡಿದೆ.

<><><>

ರಾಜ್ಯದ ಹಲವೆಡೆ ಮಳೆ ಮುಂದುವರೆದಿದೆ. ಕೊಡಗು, ದಕ್ಷಿಣ ಕನ್ನಡ, ಉಡುಪಿ, ಉತ್ತರಕನ್ನಡ ಜಿಲ್ಲೆಗಳಲ್ಲಿ ಮಳೆ ಸುರಿಯುತ್ತಿದ್ದು, ನದಿ, ಕೊಳ್ಳಗಳು ತುಂಬಿ ಹರಿಯುತ್ತಿವೆ. ಮಹಾರಾಷ್ಟ್ರದಾದ್ಯಂತ ಧಾರಾಕಾರ ಮಳೆಯಾಗುತ್ತಿದ್ದು, ಕೃಷ್ಣಾ ನದಿ ನೀರಿನ ಪ್ರಮಾಣದಲ್ಲಿ ಹೆಚ್ಚಳವಾಗಿದೆ. ಈ ಹಿನ್ನೆಲೆಯಲ್ಲಿ ನದಿ ಪಾತ್ರ ಜನರು ಎಚ್ಚರಿಕೆಯಿಂದ ಇರುವಂತೆ ಬೆಳಗಾವಿ ಜಿಲ್ಲಾಡಳಿತ ಸೂಚನೆ ನೀಡಿದೆ. ಹಿಪ್ಪರಗಿ ಜಲಾಶಯದಿಂದ ಕೃಷ್ಣಾ ನದಿಗೆ ೪೦ ಸಾವಿರ ಕ್ಯೂಸೆಕ್ ನೀರು ಹೊರಬಿಡಲಾಗಿದೆ. ಕೃಷ್ಣಾ ನದಿಯಲ್ಲಿ ೨೫ ಸಾವಿರ ಕ್ಯೂಸೆಕ್ ಗಿಂತಲು ಹೆಚ್ಚು ಒಳಹರಿವು ಇದೆ. ನದಿ ಪಾತ್ರದ ಜನರು ನದಿಗೆ ಇಳಿಯದಂತೆ ಸೂಚಸಲಾಗಿದೆ. ಬೆಳಗಾವಿ- ಜಾಂಬೋಟಿ, ಚೋರ್ಲಾ ಮಾರ್ಗವಾಗಿ ಗೋವಾಕ್ಕೆ ಸಂಪರ್ಕಿಸುವ ಹೆದ್ದಾರಿ ಬಂದ್ ಆಗಿದೆ. ಬೆಳಗಾವಿ ಜಿಲ್ಲೆಯಲ್ಲಿ ಇಂದು

ಮಳೆಯ ಪ್ರಮಾಣ ಕಡಿಮೆಯಾಗಿದೆ. ಕೊಡಗು, ಭಾಗಮಂಡಲ ಸೇರಿದಂತೆ ಕಾವೇರಿ ನದಿ ಜಲಾನಯನ ಪ್ರದೇಶದಲ್ಲಿ ಸುರಿಯುತ್ತಿರುವ ಭಾರೀ ಮಳೆಯಿಂದಾಗಿ ಮಂಡ್ಯ ಜಿಲ್ಲೆಯ ಕೆ.ಆರ್.ಎಸ್. ಜಲಾಶಯದ ಒಳಹರಿವಿನ ಪ್ರಮಾಣ ಹೆಚ್ಚಾಗಿದೆ. ಅಣೆಕಟ್ಟೆ ಒಳ ಹರಿವು ೧೯ ಸಾವಿರದ ೧೨೯ ಕ್ಯೂಸೆಕ್ ಗೆ ತಲುಪಿದ್ದು, ಒಂದೇ ದಿನದಲ್ಲಿ ಒಳ ಹರಿವಿನ ಪ್ರಮಾಣ ಎರಡು ಎರಡು ಸಾವಿರ ಕ್ಯೂಸೆಕ್ ನಷ್ಟು ಹೆಚ್ಚಾಗಿದೆ. ಜಲಾಶಯದಿಂದ ೩೪೭ ಕ್ಯೂಸೆಕ್ ನೀರನ್ನು ನದಿಗೆ ಬಿಡಲಾಗುತ್ತಿದೆ. ದಾವಣಗೆರೆ ಜಿಲ್ಲಾದ್ಯಂತ ತುಂತುರು ಮಳೆ, ಶೀತಗಾಳಿ ಮುಂದುವರಿದಿದ್ದು, ಜನ ಜೀವನ ಬಾಧಿತಗೊಂಡಿದೆ. ಕಳೆದ ರಾತ್ರಿ ಹೊನ್ನಾಳಿ ತಾಲ್ಲೂಕಿನ ಜೀನಹಳ್ಳಿಯಲ್ಲಿ ಸಿಡಿಲು ಬಡಿದು ೮೦ ಕುರಿಗಳು ಸಾವನ್ನಪ್ಪಿದೆ. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕಳೆದ ಕೆಲವು ದಿನಗಳಿಂದ ಅಬ್ಬರಿಸಿದ ಮಳೆ ಇಂದು ಕೊಂಚ ಬಿಡುವು ಪಡೆದಿದೆ. ಭಾರೀ ಗಾಳಿ ಮಳೆಯಿಂದಾಗಿ ಜಿಲ್ಲೆಯ ಜೀವನದಿಗಳು ಮೈದುಂಬಿ ಹರಿಯಲಾರಂಭಿಸಿವೆ. ಮಳೆ ಹೆಚ್ಚಾಗುವ ಭೀತಿ ಇರುವುದರಿಂದ ಜಿಲ್ಲೆಯ ಎಲ್ಲಾ ಅಂಗನವಾಡಿ, ಹಾಗೂ ಶಾಲಾ ಕಾಲೇಜುಗಳಿಗೆ ನಾಳೆಯವರೆಗೆ ರಜೆ ಘೋಷಿಸಲಾಗಿದೆ. ಉತ್ತರಕನ್ನಡ ಜಿಲ್ಲೆಯ ಕರಾವಳಿ ಹಾಗೂ ಮಲೆನಾಡು ಭಾಗಗಳಲ್ಲಿ ಉತ್ತಮವಾಗಿ ಮಳೆ ಸುರಿಯುತ್ತಿದೆ. ಜಿಲ್ಲೆಯಲ್ಲಿ ನಾಲ್ಕು ಮನೆಗಳು ಸಂಪೂರ್ಣ ಹಾನಿಗೀಡಾಗಿದೆ. ೧೩೨ ಮನೆಗಳಿಗೆ ಭಾಗಶಃ ಸೇರಿದಂತೆ ಒಟ್ಟು ೧೩೬ ಮನೆಗಳಿಗೆ ಹಾನಿಯಾಗಿದೆ ಎಂದು ಜಿಲ್ಲಾಡಳಿತ ಮಾಹಿತಿ ನೀಡಿದೆ. ಕೊಡಗು ಜಿಲ್ಲೆಯ ಬಹುತೇಕ ಕಡೆ ಐದನೇ ದಿನವೂ ವರುಣನ ಆರ್ಭಟ ಮುಂದುವರೆದಿದೆ. ಕಾವೇರಿ, ಲಕ್ಷ್ಮಣತೀರ್ಥ ನದಿಗಳಲ್ಲಿ ಪ್ರವಾಹ ಸ್ಥಿತಿ ಮುಂದುವರೆದೇ ಇದ್ದು, ಜಿಲ್ಲೆಯ ಹಲವೆಡೆ ಬಿರುಗಾಳಿಯಿಂದಾಗಿ ಮರಗಳು, ವಿದ್ಯುತ್ ಕಂಬಗಳು ಧರೆಗುರುಳಿವೆ. ಕಳೆದ ೨ ದಿನಗಳಲ್ಲಿ ಮಳೆಯಿಂದಾಗಿ ಕೊಡಗಿನಲ್ಲಿ ಇಬ್ಬರು ಸಾವನ್ನಪ್ಪಿದ್ದಾರೆ ಭಾಗಮಂಡಲ ಮತ್ತು ಕರಿಕೆ ಗ್ರಾಮಗಳ ನಡುವೆ ಭೂಕುಸಿತ ಉಂಟಾಗಿದ್ದು ಕೆಲ ಕಾಲ ವಾಹನ ಸಂಚಾರ ಸ್ಥಗಿತಗೊಂಡಿತ್ತು. ಕಳೆದೊಂದು ವಾರದಿಂದ ವಿಜಯನಗರ ಜಿಲ್ಲೆಯಾದ್ಯಂತ ಮತ್ತು ತುಂಗಭದ್ರಾ ಜಲಾಶಯದ ನದಿ ಪಾತ್ರದಲ್ಲಿ ಸುರಿಯುತ್ತಿರುವ ಮಳೆಯಿಂದ ಜಲಾಶಯದ ಒಳಹರಿವು ಹೆಚ್ಚಾಗುತ್ತಿದ್ದು ಪ್ರಸಕ್ತವಾಗಿ ತುಂಗಭದ್ರಾ ಜಲಾಶಯದಲ್ಲಿ ೧೧ ಸಾವಿರದ ೪೭೪ ಟಿಎಂಸಿ ನೀರು ಸಂಗ್ರಹವಿದೆ.

<><><><>

ವಿಜಯಪುರ ಜಿಲ್ಲೆಯಲ್ಲಿ ಅಂದಾಜು ೧೦ ಲಕ್ಷ ೫೦ ಸಾವಿರ ಹೆಕ್ಟೇರ್ ಭೌಗೋಳಿಕ ಪ್ರದೇಶವಿದ್ದು, ಅದರಲ್ಲಿ ೯ ಲಕ್ಷ ೫೦ ಸಾವಿರ ಹೆಕ್ಟರ್ ಪ್ರದೇಶದಲ್ಲಿ ಬಿತ್ತನೆ ಕಾರ್ಯ ನಡೆಯುತ್ತದೆ ಎಂದು ವಿಜಯಪುರದ ಜಂಟಿ ಕೃಷಿ ನಿರ್ದೇಶಕಿ ಎಲ್. ರೂಪಾ ತಿಳಿಸಿದ್ದಾರೆ. ಆಕಾಶವಾಣಿಗೆಯೊಂದಿಗೆ ಮಾತನಾಡಿದ ಅವರು, ಮೇ ೧೫ ರಿಂದ ಮಳೆ ಆರಂಭವಾಗಿದ್ದು, ಬೀಜ ಬಿತ್ತನೆಗೆ ಭೂಮಿ ಅನುಕೂಲವಾಗಿದೆ. ಈಗಾಗಲೇ ಜಿಲ್ಲೆಯಲ್ಲಿ ರೈತರು ಸಿದ್ಧತೆಯ ಕಾರ್ಯದಲ್ಲಿ ತೊಡಗಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ.

ಧ್ವನಿ : ಎಲ್. ರೂಪಾ (ಜಂಟಿ ಕೃಷಿ ನಿರ್ದೇಶಕಿ)

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>